ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ
ಸಿ.ಸಿ. ನಂಬ್ರ:2367/2022

ಚಾಸಾ: 13 ಪ್ರಾಸಾ:7

ದಿನಾಂಕ: 19.09.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಬಾಲರಾಜ |
| ತಂದೆಯ ಹೆಸರು | : | ಸಂಜೀವ |
| ವಯಸ್ಸು | : | 24 ವರ್ಷ |
| ಉದ್ಯೋಗ | : | ಖಾಸಗಿ ಕೆಲಸ |
| ವಾಸ ಸ್ಥಳ | : | ಆಲೂರು |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**<u>ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:</u>**

ದಿ: 13-08-2022 ರಂದು ಗಂಗೊಳ್ಳಿ ಠಾಣೆಗೆ ಹೋಗಿದ್ದಾಗ ದಾಖಲೆಗೆ ಸಹಿ ಮಾಡಿರುತ್ತೇನೆ. ದ್ವಿ ಚಕ್ರ ವಾಹನವನ್ನು ಅಲ್ಲಿ ನೋಡಿರುವುದಿಲ್ಲ.

ಸಾಕ್ಷಿ ಸ್ವತ್ತು ಸ್ವಾಧೀನತಾ ಮಹಜರಿನಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-7 ಎಂದು, ಸಾಕ್ಷಿ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು. ಅದರಲ್ಲಿ ಏನು ಬರೆದಿದೆ ಎಂದು ನನಗೆ ತಿಳಿದಿಲ್ಲ. ಸಾಕ್ಷಿ ಒಂದು ಪೋಟೋದಲ್ಲಿ ತನ್ನನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-8 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:</u>**

ದಿ: 13-08-2022 ರಂದು ಕೆಎ-20-ಇವೈ-0938 ವಾಹನವನ್ನು ನಾನು ಠಾಣೆಗೆ ಹಾಜರುಪಡಿಸಿದಾಗ ಅದನ್ನು ವಶಕ್ಕೆ ಪಡೆದು ಪಂಚನಾಮೆಯನ್ನು ಸಂಜೆ 5 ರಿಂದ 5-45ರವರೆಗೂ ಜರುಗಿಸಿ ನಿಪಿ-7ಕ್ಕೆ ನನ್ನ ಸಹಿ ಪಡೆದು ವಾಹನದ ಪೋಟೋಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಮೇಲೆ ಹೇಳಿದ ಕ್ರಮವನ್ನು ನನ್ನ ಸಮಕ್ಷಮ ನಡೆಸಿದ್ದರೂ

ಆರೋಪಿ ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಕೆ ಎಸ್ ಎನ್ ರವರಿಂದಃ**

ನಿಪಿ-8ರ ಪೋಟೋ ಯಾವ ಕಾರಣಕ್ಕಾಗಿ ತೆಗೆಯಲಾಯಿತು ಎಂದು ನನಗೆ ತಿಳಿದಿಲ್ಲ ಎಂದರೆ ಸರಿ. ಬೇರೆ ಯಾವುದೋ ಉದ್ದೇಶಕ್ಕಾಗಿ ಪೋಟೋಗೆ ನಿಲ್ಲಿಸಿರುತ್ತಾರೆ ಎಂದರೆ ಸರಿ. ಅದರಲ್ಲಿ ಕಂಡು ಬರುವ ವಾಹನ ಯಾವುದು ಮತ್ತು ಯಾರಿಗೆ ಸಂಬಂಧಿಸಿದ್ದು ಎಂದು ನನಗೆ ತಿಳಿದಿಲ್ಲ ಎಂದರೆ ಸರಿ.

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**